ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.

ಸಂಖ್ಯೆ: ಪಪೂಶಿಇ/ಪರೀಕ್ಷೆ/ನೋಂ&ಫ–02/2017–18. ದಿನಾಂಕ:05.01.2018

ಪದವಿ ಪೂರ್ವ ಶಿಕ್ಷಣ ಇಲಾಖೆಯ
ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ,

ವಿಷಯ: 2017–18ನೇ ಶೈಕ್ಷಣಿಕ ಸಾಲಿನಲ್ಲಿ ಬೋಧನಾ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರ ಹಾಗೂ ಉಪನ್ಯಾಸಕರ ಮಾಹಿತಿಯನ್ನು ONLINE ನಲ್ಲಿ ದಾಖಲಿಸದಿರುವ ಬಗ್ಗೆ

ಉಲ್ಲೇಖ: ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಪಪೂಶಿಇ/ಪರೀಕ್ಷೆ/ನೋಂ&ಫ/2017–18 ದಿನಾಂಕ: 21.10.2017

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ 2017–18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ, ಅನುದಾನಿತ, ಅನುದಾನರಹಿತ, ವಿಭಜಿತ ಹಾಗೂ ಬಿಬಿಎಂಪಿ ಪದವಿ ಪೂರ್ವ ಕಾಲೇಜುಗಳಲ್ಲಿ ಬೋಧನಾ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಪ್ರಾಂಶುಪಾಲರ ಹಾಗೂ ಉಪನ್ಯಾಸಕರ ಸೇವಾ ವಿವರಗಳ ಮಾಹಿತಿಯನ್ನು ಕಡ್ಡಾಯವಾಗಿ ಇಲಾಖಾ ವೆಬ್‌ಸೈಟ್ www.pue.kar.nic.inನ PU Online Portalನ Evaluator Menu ಅಂಕಣದಲ್ಲಿ ನೀಡಲಾಗಿರುವ ಅರ್ಜಿಯಲ್ಲಿ ಭರ್ತಿಮಾಡಿ ದಿನಾಂಕ: 10.11.2017ರೊಳಗೆ ದಾಖಲಿಸಲು ಸೂಚಿಸಲಾಗಿತ್ತು.

Basic Maths, Logic, Home Science, Geology, Education, Psychology, Statistics, Computer Science, Electronics, Karnatak Music, Hindustani Music, Tamil, Telugu, Malayalam, Arabic, French ವಿಷಯಗಳ ಉಪನ್ಯಾಕರ ಕೊರತೆಯಿದ್ದು, ಫಲಿತಾಂಶ ಪ್ರಕಟಿಸುವಲ್ಲಿ ವಿಳಂಬವಾಗುತ್ತಿದೆ. ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ತೊಂದರೆಯಾಗುತ್ತಿರುವ ಹಿನ್ನಲೆಯಲ್ಲಿ ಈ ಎಲ್ಲಾ ವಿಷಯಗಳನ್ನು ಬೋಧಿಸಿವ ಕಾಲೇಜುಗಳ ಪ್ರಾಂಶುಪಾಲರು ಕಡ್ಡಾಯವಾಗಿ ಮೇಲ್ಕಂಡ ವಿಷಯಗಳ ಉಪನ್ಯಾಸಕರ ಮಾಹಿತಿಯನ್ನು online Portal ನಲ್ಲಿ ದಾಖಲಿಸಿ ಮೌಲ್ಯಮಾಪನ ಕಾರ್ಯಕ್ಕೆ ಸದರಿ ಉಪನ್ಯಾಸಕರನ್ನು ಕಡ್ಡಾಯವಾಗಿ ಹಾಜರಾಗುವಂತೆ ಆದೇಶಿಸಲು ಸೂಚಿಸಲಾಗಿದೆ.

ಆದರೂ ಇದವರೆಗೂ ಕೆಲವು ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳು ಪ್ರಾಂಶುಪಾಲರ ಹಾಗೂ ಉಪನ್ಯಾಸಕರ ಮಾಹಿತಿಗಳನ್ನು Online Portal ನಲ್ಲಿ ದಾಖಲಿಸದಿರುವುದು, ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಗರಿಷ್ಠ ಪ್ರಮಾಣದಲ್ಲಿದ್ದರೂ ಅದಕ್ಕೆ ಅನುಗುಣವಾಗಿ ಉಪನ್ಯಾಸಕರು Onlineನಲ್ಲಿ ನೋಂದಾಯಿಸಿಕೊಳ್ಳದಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಇದರಿಂದ ದ್ವಿತೀಯ ಪಿಯುಸಿ ಮೌಲ್ಯಮಾಪನ ಕಾರ್ಯವನ್ನು ನಿಗದಿ ಪಡಿಸಿದ ಅವಧಿಯೊಳಗೆ ಪೂರ್ಣಗೊಳಿಸಲು ಸಾಧ್ಯವಾಗುವುದಿಲ್ಲ. ಇದರಿಂದ ಫಲಿತಾಂಶ ಪ್ರಕಟಣೆ ವಿಳಂಬವಾಗಿ ವಿದ್ಯಾರ್ಥಿಗಳ ಮುಂದಿನ ಅಧ್ಯಯನಕ್ಕೆ ಪ್ರವೇಶ ಪಡೆಯಲು ತೊಂದರೆಯಾಗುತ್ತಿದೆ.

ತಮ್ಮ ಜಿಲ್ಲೆಯಲ್ಲಿ ಮೌಲ್ಯಮಾಪನ ಕಾರ್ಯಕ್ಕೆ Online Portal ನಲ್ಲಿ ಮಾಹಿತಿಗಳನ್ನು ದಾಖಲಿಸದ ಕಾಲೇಜುಗಳ ಪ್ರಾಂಶುಪಾಲರು, ತಮ್ಮ ಕಾಲೇಜಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ವಿವರಗಳನ್ನು ಕಡ್ಡಾಯವಾಗಿ ದಿನಾಂಕ: 10.01.2018 ರೊಳಗೆ ನೋಂದಾಯಿಸುವಂತೆ ಸೂಚಿಸಲು ಉಪನಿರ್ದೇಶಕರಿಗೆ ತಿಳಿಸಿದೆ. ಸದರಿ ಕಾಲೇಜುಗಳ ಪ್ರಾಂಶುಪಾಲರು ಚೆಕ್‌ಲಿಸ್ಟ್‌ನಲ್ಲಿರುವ ಮಾಹಿತಿಗಳನ್ನು ಪರಿಶೀಲಿಸಿ, ದೃಢೀಕರಿಸಿ ಸಹಿ ಮಾಡಿದ ಪ್ರತಿಯನ್ನು ದಿನಾಂಕ: 16.01.2018 ರೊಳಗೆ ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

Scanned by CamScanner

ಮೌಲ್ಯಮಾಪನ ಕಾರ್ಯಕ್ಕೆ Online Portal ನಲ್ಲಿ ಮಾಹಿತಿಗಳನ್ನು ದಾಖಲಿಸದ ಪ್ರಾಂಶುಪಾಲರ ಹಾಗೂ ಉಪನ್ಯಾಸಕರ ಮೇಲೆ ಇಲಾಖೆ ಶಿಸ್ತುಕ್ರಮ ಜರುಗಿಸಲಾಗುವುದು. ಮೌಲ್ಯಮಾಪನ ಕಾರ್ಯಕ್ಕೆ Online Portal ನಲ್ಲಿ ಮಾಹಿತಿಗಳನ್ನು ದಾಖಲಿಸದ ಕಾಲೇಜುಗಳ ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿಯಲಾಗುವುದು.

5/1/18

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ (ಅನುಷ್ಠಾನಕ್ಕಾಗಿ).

Scanned by CamScanner